ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಹೆಗ್ಗಡ ದೇವನಕೋಟೆ ತಾಲ್ಲೂಕು ಬೇಗೂರು ಸುತ್ತಮುತ್ತ ಅಕ್ರಮ ಮದ್ಯ ಮಾರಾಟದ ಬಗ್ಗೆ

ಶ್ರೀಎಸ್.ನಾಗರಾಜ್(ಸಂದೇಶ್ನಾಗರಾಜ್)(ಸ್ಥಳೀಯಸಂಸ್ಥೆಗಳಕ್ಷೇತ್ರ) :-

824 (733) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗುಂಡ್ಲುಪೇಟೆ ತಾಲ್ಲೂಕು, ಬೇಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸುತ್ತಮುತ್ತಲ ಕಾಡಂಚಿನ ಸುಮಾರು ಹತ್ತಾರು ಗ್ರಾಮಗಳಲ್ಲಿ ಅಕ್ರಮ ಮದ್ಯ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ತಡೆಗಟ್ಟಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಈ ಗ್ರಾಮಗಳಲ್ಲಿ ಹೆಚ್ಚಾಗಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಗಿರಿಜನರು ವಾಸಿಸುತ್ತಿದ್ದು, ಯುವಕರು, ವಿದ್ಯಾರ್ಥಿಗಳು ಕುಡಿತದ ಚಟಕ್ಕೆ ಬಿದ್ದು, ಅಕ್ರಮ ಮದ್ಯ ಸೇವಿಸಿ ಅಪಾಯಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೂಡಲೇ ಇದನ್ನು ನಿಲ್ಲಿಸಲು ಕ್ರಮ ಜರುಗಿಸಲಾಗುವುದೇ ?